ಸಚಿವಾಲಯ ಏನು ಕ್ರಮ ಕೈಗೊಂಡಿದೆ ಎಂಬುದು ಈವರೆಗೂ ತಿಳಿಯದೇ, ಅಂದಿನ ಮುಖ್ಯಮಂತ್ರಿಗಳ ಹೇಳಿಕೆ. ಕಾರ್ಯಗತವಾಗದೆ ಉಳಿದಿದೆ. ಆದ್ದರಿಂದ ಗೃಹ ಮಂತ್ರಿಗಳು ನಾಲ್ಕು ಜನ ಹುತಾತ್ಮ ಪೋಲೀಸ್ ಅಧಿಕಾರಿಗಳ ಕುಟುಂಬದವರಿಗೆ ತುರ್ತಾಗಿ ನಿವೇಶನ ಮಂಜೂರು ಮಾಡಿಸುವಲ್ಲಿ ಕ್ರಮ ಕೈಗೊಳ್ಳಬೇಕೆಂದು ಈ ಮೂಲಕ ಕೋರುತ್ತೇನೆ.

ಶ್ರೀ ಎಂ.ವೀರಪ್ಪ ಮೊಯಿಲಿ: (ಶಿಕ್ಷಣ ಮತ್ತು ಸಂಸದೀಯ ವ್ಯವಹಾರಗಳ ಮಂತ್ರಿಗಳು):- ಮಾನ್ಯ ಉಪಾಧ್ಯಕ್ಷರೇ, ಈ ವಿಚಾರವನ್ನು ಸನ್ಮಾನ್ಯ ಗೃಹ ಮತ್ತು ಆಬ್ಕಾರಿ ಮಂತ್ರಿಗಳ ಗಮನಕ್ಕೆ ತರಲಾಗುವುದು.

2. ಬಳ್ಳಾರಿ ನಗರದಲ್ಲಿ ನಂದಿಹಳ್ಳಿಯ ಸ್ನಾತಕೋತ್ತರ ಕೇಂದ್ರವನ್ನು ವಿಸ್ತರಣೆ ಮಾಡುವ ಬಗ್ಗೆ.

ಶ್ರೀ ಅಲ್ಲಂ ವೀರಭದ್ರಪ್ಪ:(ಕುರುಗೋಡು):- ಮಾನ್ಯ ಉಪಾಧ್ಯಕ್ಷರೆ, ಬಳ್ಳಾರಿ ನಗರದಲ್ಲಿ ನಂದಿಹಳ್ಳಿಯ ಸ್ನಾತಕೋತ್ತರ ಕೇಂದ್ರದ ವಿಸ್ತರಣೆಯನ್ನು ಮಾಡುವ ವಿಷಯವನ್ನು ಸಾರ್ವಜನಿಕ ಹಿತದೃಷ್ಟಿಯಿಂದ ಸರ್ಕಾರದ ಗಮನಕ್ಕೆ ತರಲು ಬಯಸುತ್ತೇನೆ. ಆಮೇಲೆ ಮಾನ್ಯ ಉಪಾಧ್ಯಕ್ಷರೆ, ಈ ವಿಷಯದ ಸ್ವಲ್ಪ ಹಿನ್ನೆಲೆ ಹೇಳಬೇಕೆಂದರೆ, ...

ಉಪಾಧ್ಯಕ್ಷರು: ಇದು ಬರೀ ಹೇಳುವುದಷ್ಟೆ.

ಶ್ರೀ ಎಂ.ವೀರಪ್ಪಮೊಯಿಲಿ:(ಶಿಕ್ಷಣ ಹಾಗೂ ಸಂಸದೀಯ ವ್ಯವಹಾರಗಳ ಸಚಿವರು):- ಸನ್ಮಾನ್ಯ ಉಪಾಧ್ಯಕ್ಷಿಣಿಯವರೆ, ನಂದಿಹಳ್ಳಿಯಲ್ಲಿ 1975ರಿಂದ ಒಂದು ಸ್ನಾತಕೋತ್ತರ ಶಿಕ್ಷಣ ಕೇಂದ್ರವನ್ನು ಸ್ಥಾಪಿಸಲಾಗಿದೆ. 242 ಎಕರೆ ಭೂಮಿಯನ್ನು ಈಗಾಗಲೇ ಈ ಕೇಂದ್ರದ ಸಲುವಾಗಿ ಪಡೆಯಲಾಗಿದೆ. ಈ ಆವರಣದಲ್ಲಿ ಒಂದು ಕೋಟಿ ರೂಪಾಯಿಗಳಷ್ಟು ಹಣವನ್ನು ವೆಚ್ಚ ಮಾಡಿ ಅನೇಕ ಅಭಿವೃದ್ಧಿ ಕೆಲಸಗಳನ್ನು ಕೈಗೊಳ್ಳಲಾಗಿದೆ. ಈ ಕೇಂದ್ರದಲ್ಲಿ ಮಿನರಲ್ ಪ್ರೊಸಿಂಗ್, ಮಿನರಲ್ ಎಕ್ಸ್‌ಪ್ಲೊರೇಶನ್ ಮತ್ತು ಜಿಯಾಲಜಿ ವಿಷಯಗಳಲ್ಲಿ ಮೊಟ್ಟ ಮೊದಲು ಸ್ನಾತಕೋತ್ತರ ಶಿಕ್ಷಣ ವ್ಯವಸ್ಥೆ ಇತ್ತು. 1985 ರಿಂದ ಕನ್ನಡ ಮತ್ತು ಗಣಿತ ವಿಷಯಗಳಲ್ಲಿಯೂ ಸ್ನಾತಕೋತ್ತರ ಶಿಕ್ಷಣವನ್ನು ನೀಡಲಾಗುತ್ತಿದೆ. ಸುಮಾರು 250 ವಿದ್ಯಾರ್ಥಿಗಳು ಈ ಕೇಂದ್ರದಲ್ಲಿ ಈಗ ಉಚ್ಚ ಶಿಕ್ಷಣ ಪಡೆಯುತ್ತಿದ್ದಾರೆ.

ಈಗಾಗಲೇ ನಂದಿಹಳ್ಳಿಯಲ್ಲಿ ಒಂದು ಸ್ನಾತಕೋತ್ತರ ಶಿಕ್ಷಣ ಕೇಂದ್ರವಿರುವುದರಿಂದ ಅದಕ್ಕೆ ಕೇವಲ 56 ಕಿ.ಮೀ. ದೂರದಲ್ಲಿರುವ ಬಳ್ಳಾರಿಯಲ್ಲಿ ಮತ್ತೊಂದು ಸ್ನಾತಕೋತ್ತರ ಶಿಕ್ಷಣ ಕೇಂದ್ರವನ್ನು ಸ್ಥಾಪಿಸಲು ವಿಷಯ ತೀವ್ರವಾಗಿ ಪರಿಶೀಲಿಸಬೇಕಾಗಿದೆ. ಈ ವಿಷಯದಲ್ಲಿ ಗುಲ್ಬರ್ಗಾ ವಿಶ್ವವಿದ್ಯಾಲಯವು 1986 ರಲ್ಲಿ ರಚಿಸಲಾದ ಶ್ರೀ ರಾಮಚಂದ್ರನ್ ನೇತೃತ್ವದ ಏಕ ಸದಸ್ಯ ಆಯೋಗದ ವರದಿಯಲ್ಲಿ ಈ ಅಂಶಗಳನ್ನು ಕೂಲಂಕುಷವಾಗಿ ಪರಿಶೀಲಿಸಲಾಗಿದೆ.

ಈಗ ಬಳ್ಳಾರಿ ನಗರದ ಅನೇಕ ಸಂಘ ಸಂಸ್ಥೆಗಳು ಮತ್ತು ಇತರರು ಗುಲ್ಬರ್ಗಾ ವಿಶ್ವವಿದ್ಯಾಲಯದ ಒಂದು ಸ್ನಾತಕೋತ್ತರ ಕೇಂದ್ರವನ್ನು ಬಳ್ಳಾರಿಯಲ್ಲಿ ಸ್ಥಾಪಿಸಬೇಕೆಂದು ಸರ್ಕಾರವನ್ನು ಒತ್ತಾಯಪಡಿಸುತ್ತಿವೆ. ಆದರೆ ಈ ವಿಷಯದಲ್ಲಿ ಗುಲ್ಬರ್ಗಾ ವಿಶ್ವವಿದ್ಯಾಲಯದಿಂದ ಯಾವುದೇ ಪ್ರಸ್ತಾವನೆ ಬಂದಿರುವುದಿಲ್ಲ. ಸಾರ್ವಜನಿಕ ಒತ್ತಾಯವನ್ನು ವಿಶ್ವವಿದ್ಯಾಲಯದ ಗಮನಕ್ಕೆ ತರಲಾಗಿದ್ದು, ಬಳ್ಳಾರಿ, ರಾಯಚೂರು ಮತ್ತು ಬೀದರ್‌ನಲ್ಲಿ ಸ್ನಾತಕೋತ್ತರ ಕೇಂದ್ರ ಸ್ಥಾಪಿಸುವ ವಿಷಯದಲ್ಲಿ ಗುಲ್ಬರ್ಗಾ ವಿಶ್ವದ್ಯಾಲಯದ ಅಭಿಪ್ರಾಯವನ್ನು ಕೋರಲಾಗಿದೆ. ವಿಶ್ವವಿದ್ಯಾಲಯದ ಅಭಿಪ್ರಾಯವನ್ನು ಪಡೆದ ನಂತರ ಎಲ್ಲ ವಿಷಯಗಳನ್ನು ಗಣನೆಗೆ ತೆಗೆದುಕೊಂಡು ಸರ್ಕಾರವು ಅಂತಿಮ ತೀರ್ಮಾನವನ್ನು ತೆಗೆದುಕೊಳ್ಳುತ್ತದೆ.

3. ಕೃಷ್ಣರಾಜ ಸಾಗರ ಅಭಿವೃದ್ಧಿ ಪ್ರಾಧಿಕಾರ ರಚಿಸುವ ಬಗ್ಗೆ.

Smt.DAMAYANTHI BOREGOWDA : (Srirangapatna):- Krishnarajasagar is a famous dam which should be protected. The